# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿತ್ತೀಯ ಕಾರ್ಯನೀತಿ ಸಂಸ್ಥೆಯನ್ನು ಪುನರ್ ರಚಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂ: ಆಇ 52 ಬಿಜಿಎಲ್ 2005, ದಿ:10.06.2005.
2) ಸರ್ಕಾರದ ಆದೇಶ ಸಂ: ಆಇ 33 ಜಿಐಇ 2006, ದಿ:08.01.2007.
3) ಸರ್ಕಾರದ ಆದೇಶ ಸಂ: ಆಇ 78 ಸಮಯ 2008, ದಿ:06.05.2008.
4) ಅಧಿಸೂಚನೆ ಸಂಖ್ಯೆ: ಎಫ್‌ಡಿ 10 ಎಸ್‌ಆರ್‌ಎ 2008, ದಿ:14-9-2009.
5) ನಿರ್ದೇಶಕರು, ವಿತ್ತೀಯ ಕಾರ್ಯನೀತಿ ಸಂಸ್ಥೆ, ಬೆಂಗಳೂರು, ಇವರ ಅರೆ ಸರ್ಕಾರಿ ಪತ್ರ ಸಂ: ವಿಕಾಸಂ/ಸಿ/11/2013-14/2013, ದಿ:24.04.2013.

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:10.06.2005ರ ಆದೇಶದಲ್ಲಿ ರಾಜ್ಯ ಲೆಕ್ಕಪತ್ರ ಇಲಾಖೆಯಲ್ಲಿ ಸರ್ಕಾರದ ಉಪ ಕಾರ್ಯದರ್ಶಿ (ಆ&ಸಂ)ರವರ ನೇತೃತ್ವದಲ್ಲಿ ವಿತ್ತೀಯ ನೀತಿ ವಿಶ್ಲೇಷಣಾ ಕೋಶವನ್ನು ಆರಂಭಿಸಲಾಯಿತು. ರಾಜ್ಯ ಲೆಕ್ಕಪತ್ರ ಇಲಾಖೆಯಲ್ಲಿ ಅಂದಿಗೆ ಖಾಲಿ ಇದ್ದಂತಹ 18 ಹುದ್ದೆಗಳನ್ನು ವೇತನ ಶ್ರೇಣಿ ರಹಿತ ಹುದ್ದೆಗಳನ್ನಾಗಿ ಪರಿವರ್ತಿಸಿ ಈ ಕೋಶದಲ್ಲಿ ಸೇರಿಸಲಾಗಿತ್ತು. ಈ ಕೋಶವು ಮುಖ್ಯವಾಗಿ 5 ವಿಭಾಗಗಳನ್ನು ಒಳಗೊಂಡಿದ್ದು, ರಾಜ್ಯದ ಆರ್ಥಿಕ ಸ್ಥಿತಿಗತಿಯನ್ನು ವಿಶ್ಲೇಷಿಸಿ ಆದಾಯವನ್ನು ನಿಗದಿಪಡಿಸಲು ಹಾಗೂ ನಿರೀಕ್ಷಿತ ಆದಾಯವನ್ನು ಕ್ರೋಢೀಕರಿಸಲು ಸರ್ಕಾರಕ್ಕೆ ಸಹಕರಿಸುವುದು, ಸರ್ಕಾರದ ವೆಚ್ಚ, ಸಾಲ, ಗ್ಯಾರಂಟಿಯನ್ನು ನಿರ್ವಹಿಸುವುದು, ರಾಜ್ಯದಲ್ಲಿ ಆರ್ಥಿಕ ವಿಕೇಂದ್ರೀಕರಣ ಹಾಗೂ ಇತರೆ ಆರ್ಥಿಕತೆಗೆ ಸಂಬಂಧಿಸಿದ ಮಾಹಿತಿಗಳನ್ನು ಸಂಗ್ರಹಿಸಿ ವಿಶ್ಲೇಷಿಸುವ ಕಾರ್ಯವನ್ನು ನಿರ್ವಹಿಸಲು ಈ ಕೋಶವನ್ನು ರಚಿಸಲಾಗಿತ್ತು.

ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ದಿ:08.01.2007ರ ಆದೇಶದಲ್ಲಿ 'ನಿರ್ದೇಶನಾಲಯ'ದ ಸ್ಥಾನ-ಮಾನದೊಂದಿಗೆ ವಿತ್ತೀಯ ಕಾರ್ಯನೀತಿ ಸಂಸ್ಥೆಯನ್ನು ರಚಿಸಲಾಗಿತ್ತು. ಆರ್ಥಿಕ ಯೋಜನೆ, ನಿರ್ವಹಣೆ, ಆಡಳಿತಾತ್ಮಕ ಅಂಶಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಸಂಪನ್ಮೂಲ ಕ್ರೋಢೀಕರಿಸುವ ಇಲಾಖೆಗಳಾದ ವಾಣಿಜ್ಯ ತೆರಿಗೆಗಳ ಇಲಾಖೆ, ಅಬಕಾರಿ ಇಲಾಖೆ, ಖಜಾನೆ ಇಲಾಖೆ, ರಾಜ್ಯ ಲೆಕ್ಕಪತ್ರ ಇಲಾಖೆ ಮತ್ತು ಇತರೆ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿ ನೀಡಿ ಅವರ ಕಾರ್ಯಕೌಶಲ್ಯ ಮತ್ತು ನಿರ್ಣಯ ಕೈಗೊಳ್ಳುವ ಸಾಮರ್ಥ್ಯವನ್ನು ವೃದ್ಧಿಸಲು ಸಹಕಾರಿಯಾಗುವಂತೆ ತರಬೇತಿ ನೀಡುವುದು ಹಾಗೂ ಆರ್ಥಿಕ ರಂಗದಲ್ಲಿ ಉತ್ತಮ ಆಡಳಿತ ನಿರ್ವಹಣೆಗೆ ಪ್ರೋತ್ಸಾಹ, ಸಂಶೋಧನೆ ಮತ್ತು ಉನ್ನತ ಅಧ್ಯಯನ ಕೈಗೊಂಡು ಸರ್ಕಾರಕ್ಕೆ ಸಲಹೆ, ಸಹಕಾರ ನೀಡುವುದು ಈ ಸಂಸ್ಥೆಯ ಉದ್ದೇಶವಾಗಿತ್ತು.

ಮೇಲೆ ಓದಲಾದ ಕ್ರ.ಸಂ.(3)ರಲ್ಲಿನ ದಿ:06.05.2008ರ ಆದೇಶದಲ್ಲಿ ವಿತ್ತೀಯ ಕಾರ್ಯನೀತಿ ಸಂಸ್ಥೆಯ ನಿರ್ದೇಶಕರನ್ನು ವಿತ್ತೀಯ ನೀತಿ ವಿಶ್ಲೇಷಣಾ ಕೋಶದ ಮುಖ್ಯಸ್ಥರನ್ನಾಗಿಯೂ ನೇಮಿಸಿ ಆದೇಶಿಸಲಾಗಿತ್ತು. ಮೇಲೆ ಕ್ರ.ಸಂ. (4)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳಿಗೆ ತಿದ್ದುಪಡಿ ತಂದು ನಿರ್ದೇಶಕರು, ವಿತ್ತೀಯ ಕಾರ್ಯನೀತಿ ಸಂಸ್ಥೆ, ಇವರನ್ನು ಇಲಾಖಾ ಮುಖ್ಯಸ್ಥರೆಂದು ಪರಿಗಣಿಸಲಾಗಿದೆ.

ಮೇಲೆ ಕ್ರ.ಸಂ.(5)ರಲ್ಲಿ ಓದಲಾದ ದಿ:24.04.2013ರ ಅರೆ ಸರ್ಕಾರಿ ಪತ್ರದಲ್ಲಿ ವಿತ್ತೀಯ ನೀತಿ ವಿಶ್ಲೇಷಣಾ ಕೋಶವನ್ನು ವಿತ್ತೀಯ ಕಾರ್ಯನೀತಿ ಸಂಸ್ಥೆಯೊಂದಿಗೆ ವಿಲೀನಗೊಳಿಸಬೇಕೆಂದು ನಿರ್ದೇಶಕರು, ವಿತ್ತೀಯ ಕಾರ್ಯನೀತಿ ಸಂಸ್ಥೆ, ಇವರು ಕೋರಿರುತ್ತಾರೆ.

ವಿತ್ತೀಯ ನೀತಿ ವಿಶ್ಲೇಷಣಾ ಕೋಶ ಮತ್ತು ವಿತ್ತೀಯ ಕಾರ್ಯನೀತಿ ಸಂಸ್ಥೆಗಳ ರಚನೆಯ ಉದ್ದೇಶ ಮತ್ತು ಕಾರ್ಯವ್ಯಾಪ್ತಿಯು ಒಂದರೊಳಗೊಂದು ಅಂತರ್‌ಗತವಾಗಿರುವುದನ್ನು ಗಮನಿಸಿ,

... 2

ವಿತ್ತೀಯ ನೀತಿ ವಿಶ್ಲೇಷಣಾ ಕೋಶವನ್ನು ವಿಲೀನಗೊಳಿಸಿದ ನಂತರ ವಿತ್ತೀಯ ಕಾರ್ಯನೀತಿ ಸಂಸ್ಥೆಯನ್ನು ಪುನರ್‌ಗಚಿಸುವುದು ಸೂಕ್ತವೆಂದು ಸರ್ಕಾರ ಮನಗಂಡು ಈ ಮುಂದಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಆಇ 22 ಸಾವಿಯೋ 2013, ಬೆಂಗಳೂರು, ದಿನಾಂಕ: 03.10.2013.

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ವಿತ್ತೀಯ ನೀತಿ ವಿಶ್ಲೇಷಣಾ ಕೋಶ ಮತ್ತು ವಿತ್ತೀಯ ಕಾರ್ಯನೀತಿ ಸಂಸ್ಥೆಯ ಉದ್ದೇಶ ಮತ್ತು ಕಾರ್ಯವ್ಯಾಪ್ತಿಯು ಒಂದಗೊಳಗೊಂದು ಅಂತರ್‌ಗತವಾಗಿರುವುದರಿಂದ, ತಕ್ಷಣದಿಂದ ಜಾರಿಗೆ ಬರುವಂತೆ ವಿತ್ತೀಯ ನೀತಿ ವಿಶ್ಲೇಷಣಾ ಕೋಶವನ್ನು ವಿಲೀನಗೊಳಿಸಿ ವಿತ್ತೀಯ ಕಾರ್ಯನೀತಿ ಸಂಸ್ಥೆಯನ್ನು ಪುನರ್‌ರಚಿಸಿ ಆದೇಶಿಸಲಾಗಿದೆ.

ವಿತ್ತೀಯ ಕಾರ್ಯ ನೀತಿ ಸಂಸ್ಥೆಯು ನಿರ್ವಹಿಸಬೇಕಿರುವ ನಿರ್ದಿಷ್ಟ ಪಾತ್ರ ಮತ್ತು ಜವಾಬ್ದಾರಿಗಳನ್ನು ಈ ಆದೇಶದ ಅನುಬಂಧ-I ರಲ್ಲಿ ನೀಡಲಾಗಿದೆ. ಈ ವಿಲೀನದಿಂದ ಉಂಟಾಗುವ ಆಡಳಿತಾತ್ಮಕ ವಿಷಯಗಳ ಸ್ಥಿತಿಯನ್ನು ಅನುಬಂಧ-II ರಲ್ಲಿ ನಮೂದಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ಲಕ್ಷ್ಮಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಆಡಳಿತ & ಮುಂಗಡ)

3/10/2013

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು - ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಮುದ್ರಿತ 100 ಪ್ರತಿಗಳನ್ನು ಆರ್ಥಿಕ ಇಲಾಖೆ (ಮುಂಗಡಗಳು), ವಿಧಾನ ಸೌಧ, ಬೆಂಗಳೂರು, ಇಲ್ಲಿಗೆ ಕಳುಹಿಸಲು ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು (ಎ & ಇ) ಕರ್ನಾಟಕ, ಬೆಂಗಳೂರು-1.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು,
3. ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಅಭಿವೃದ್ಧಿ ಆಯುಕ್ತರು,
4. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿ (ಆ&ಸಂ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-01,
6. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು,
7. ಗೌವರ್ನಿಂಗ್ ಕೌನ್ಸಿಲ್‌ನ ಎಲ್ಲಾ ಸದಸ್ಯರುಗಳು, ವಿತ್ತೀಯ ಕಾರ್ಯನೀತಿ ಸಂಸ್ಥೆ ಬೆಂಗಳೂರು-ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-60,
8. ನಿರ್ದೇಶಕರು, ವಿತ್ತೀಯ ಕಾರ್ಯನೀತಿ ಸಂಸ್ಥೆ, ಬೆಂಗಳೂರು-ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-60,
9. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಪೋಡಿಯಂ ಬ್ಲಾಕ್, ಬೆಂಗಳೂರು-01.
10. ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು-09.
11. ಕಛೇರಿ ಪ್ರತಿ/ ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಆಇ 22 ಸಾವಿಯೋ 2013, ದಿನಾಂಕ:03.10.2013ರ

ಅನುಬಂಧ-1.

Fiscal Policy Institute has to carryout the following activities:

1. To provide structured training and research programs for Government Officers/officials on various aspects of financial planning, administration and management.
2. To provide the necessary physical infrastructure and managerial resources to facilitate such training and research on an ongoing basis.
3. To develop best practices in governance in the areas of Fiscal finance.
4. To take up specialized research and studies of immediate advantage to the State.
5. To advice and support Finance Department on following areas;
   - **Tax Policy Analysis and Resource Forecasting** - Analyze macroeconomic indicators and revenue trends, tracking revenue collections, analyzing tax policy and the impacts on Government finance, and providing accurate and credible revenue estimates and projections to support Government fiscal planning and management.
   - **Expenditure Planning, Analysis and Project evaluation** - Extend support in budget formulation through analytical work in the areas of baseline spending estimates, expenditure prioritization, fiscal impacts of policy changes and program trends, medium-term expenditure planning, and the integration of plan initiatives and capital projects into the medium-term fiscal plan. To study on sequencing of expenditure by the Departments and how best it could be programmed with revenue forecast so that there is less of mismatch between revenue flows and expenditures. Also conduct evaluations of programs, schemes, policies to assess their effectiveness and efficiency. Information about efficiency and effectiveness that could be used for multiple purposes: to help fine-tune the programs or policies to enhance their usefulness to the Government, to help ensure that programs are continuing to provide the desired outcomes, to help

...2..